ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃಬೆಂಮಪಾ/ಕಾ.ಅ(ಬ್ಯಾ.ವಿ)/ತಾ.ಮಂ/(ಬ್ಯಾ.ವಿ)/231/11-12

ಕಾರ್ಯಪಾಲಕ ಅಭಿಯಂತರರ ಕಛೇರಿ
ಬ್ಯಾಟರಾಯನಪುರ ವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ: 25-7-2011

ತಾಂತ್ರಿಕ ಮಂಜೂರಾತಿ

ವಿಷಯ:- Improvements and asphalting roads and drains at Sahakaranagara G Block 10th cross road in ward no. 07.

ಉಲ್ಲೇಖ:1. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ ಕಾಮಗಾರಿ ಸಂಕೇತ: ಸಂಖ್ಯೆ: 007-12-000027

2. ಕಾರ್ಯಪಾಲಕ ಅಭಿಯಂತರರು (ಬ್ಯಾ.ವಿ) ಆಡಳಿತಾತ್ಮಕ ಅನುಮೋದನೆ ಬೃಬೆಂಮಪಾ/ಕಾ.ಅ/ಆ.ಅ/231/11-12 ದಿ: 25-7-2011

ಮೇಲ್ಕಂಡ ವಿಷಯಕ್ಕೆ ಸಂಬಂದಿಸಿದಂತೆ, ಕಾರ್ಯಪಾಲಕ ಅಭಿಯಂತರರು, (ಬ್ಯಾಟರಾಯನಪುರ ವಿಭಾಗ) ರವರು 2010-11ನೇ ಸಾಲಿನ ಲೋಕೋಪಯೋಗಿ ಇಲಾಖೆ ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಯಲಹಂಕ ವಲಯಕ್ಕೆ 2011-12ನೇ ಸಾಲಿನ MLA GRANTS P2201 Assembly constituency development works ಯೋಜನೆಯಡಿಯಲ್ಲಿ ಆಡಳಿತಾತ್ಮಕ ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ. 9.50 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಮಂಡಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಜಂಟಿ ಆಯುಕ್ತರು ಯಲಹಂಕ ವಲಯ ರವರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ವಿ.ಆ/ಯೋಜನೆ/ಪಿ.ಆರ್/3008/09-10 ದಿನಾಂಕ: 25.01.2010 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಪುಸ್ತಕ ಪುಟ ಸಂಖ್ಯೆ: ಕ್ರ.ಸಂ:231ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ. 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗೆ ಟೆಂಡರ್ ಕರೆಯುವುದು.
2. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಗಳು, ಬಿಬಿಎಂಪಿ ರವರಿಗೆ ಮಾಹಿತಿಗಾಗಿ.